ನಿ-330
ಕ್ರ/43

**ಕರ್ನಾಟಕ ವಿಧಾನ ಪರಿಷತ್**

**148 ನೇ ಮುಂದುವರೆದ ಅಧಿವೇಶನ-2022**

| ನಿಯಮ-330ರಡಿಯ ಸೂಚನೆ | |
|---|---|
| ಸೂಚನೆ ನೀಡಿದ ಸದಸ್ಯರ ಹೆಸರು | ಶ್ರೀ ವೈ.ಎ.ನಾರಾಯಣಸ್ವಾಮಿ, ವಿಧಾನಪರಿಷತ್ತಿನ ಮಾನ್ಯ ಸದಸ್ಯರು(ಶಿಕ್ಷಕರ ಕ್ಷೇತ್ರ) |

**ಸೂಚನೆಯ ವಿಷಯ**

*ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಪ್ರಾರಂಭಗೊಂಡು ಬಹಳ ವರ್ಷಗಳೇ ಕಳೆದಿದ್ದರೂ ಇದುವರೆವಿಗೆ ಖಾಯಂ ಬೋಧಕ ಬೋಧಕೇತರ ಸಿಬ್ಬಂದಿಗಳಿಲ್ಲದೇ ಸದರಿ ವಿಶ್ವವಿದ್ಯಾಲಯಕ್ಕೆ ಖಾಯಂ ಕಟ್ಟಡವಿಲ್ಲದೆ ತನ್ಮೂಲಕ ವಿದ್ಯಾರ್ಥಿಗಳ ವಿಶ್ವಾಸವನ್ನು ಕಳೆದುಕೊಳ್ಳುತ್ತಿರುವ ಮೇಲ್ಕಂಡ ವಿಶ್ವವಿದ್ಯಾಲಯದ ಸರ್ವತೋಮುಖ ಅಭಿವೃದ್ಧಿ ಬಗ್ಗೆ*

**ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಹೇಳಿಕೆ**

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ, 2015ರ ಅಧಿನಿಯಮತಿಯ ಮೂಲಕ ಸ್ಥಾಪಿಸಲಾದ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವನ್ನು 2017-18ನೇ ಸಾಲಿನಿಂದ ಕಾರ್ಯಾರಂಭಗೊಳಿಸಲಾಗಿದೆ. ಸದರಿ ಅಧಿನಿಯಮದಲ್ಲಿ ಗೊತ್ತುಪಡಿಸಲಾದ ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲ್ಲೂಕಿನ ಜಂಗಮಕೋಟೆಯಲ್ಲಿ ಪರ್ಯಾಪ್ತ ಜಮೀನು ಲಭ್ಯವಾಗದ ಕಾರಣ ಅದೇ ಜಂಗಮಕೋಟೆ ಹೋಬಳಿಯ ಅಮರಾವತಿ ಗ್ರಾಮದ ಸ.ನಂ:147ರಲ್ಲಿನ 110.25 ಎಕರೆ ಜಮೀನನ್ನು ಸರ್ಕಾರವು ಉಚಿತವಾಗಿ ಮಂಜೂರು ಮಾಡಿದ್ದು, ಅಲ್ಲಿ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಸುಸಜ್ಜಿತವಾದ ಕೇಂದ್ರಸ್ಥಾನವನ್ನು ಸ್ಥಾಪಿಸಲು ಯೋಜಿಸಲಾಗಿದೆ. ಮೂಲಸೌಕರ್ಯ ನಿರ್ಮಾಣ ಕಾಮಗಾರಿಗಳ ಅಂದಾಜುಗಳು ಹಾಗೂ ಮಹಾಯೋಜನೆಯನ್ನು (Master Plan) ಸಿದ್ಧಪಡಿಸಲು ಸರ್ಕಾರದ ಆದೇಶ ಸಂಖ್ಯೆ:ಇಡಿ 4 ಹೆಚ್‌ಪಿಯು 2021, ದಿನಾಂಕ:18.10.2021ರನ್ವಯ ಮುಖ್ಯ ಇಂಜಿನೀಯರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜಿನೀಯರಿಂಗ್ ಘಟಕ, ಮಾಗಡಿ ರಸ್ತೆ, ಬೆಂಗಳೂರು ಇವರಿಗೆ ವಹಿಸಲಾಗಿದೆ.

ಪೂರ್ಣಪ್ರಮಾಣದ ಕೇಂದ್ರಸ್ಥಾನವನ್ನು ಅಭಿವೃದ್ಧಿಪಡಿಸುವವರೆಗೆ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಕಾರ್ಯಚಟುವಟಿಕೆಗಳಿಗೆ ಬಾಧಕವಾಗದಂತೆ ಹಾಗೂ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ, ಕೋಲಾರದಲ್ಲಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಪ್ರಾದೇಶಿಕ ಕೇಂದ್ರದಲ್ಲಿ ತಾತ್ಕಾಲಿಕವಾಗಿ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು ಕಾರ್ಯನಿರ್ವಹಿಸುತ್ತಿದೆ.

ಬೆಂಗಳೂರು ವಿಶ್ವವಿದ್ಯಾಲಯದಿಂದ ಸ್ಥಳಾಂತರಿಸಿದ ಅಧ್ಯಯನ ವಿಭಾಗಗಳು ಸೇರಿದಂತೆ ಒಟ್ಟು 12 ಅಧ್ಯಯನ ವಿಭಾಗಗಳನ್ನು ಹಾಗೂ ಅವುಗಳಲ್ಲಿ 56 ಬೋಧಕ ಹುದ್ದೆಗಳನ್ನು ಮತ್ತು ವಿವಿಧ ವೃಂದಗಳ 87 ಬೋಧಕೇತರ ಹುದ್ದೆಗಳನ್ನು ಸೃಜಿಸಲಾಗಿದೆ. ಬೆಂಗಳೂರು ವಿಶ್ವವಿದ್ಯಾಲಯದ ಇಬ್ಬರು ಸಹಾಯಕ ಪ್ರಾಧ್ಯಾಪಕರನ್ನು ಹಾಗೂ 8 ಬೋಧಕೇತರ ನೌಕರರನ್ನು ಹುದ್ದೆಗಳ ಸಹಿತವಾಗಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 58(1)ರಡಿ ಬೆಂಗಳೂರು ಉತ್ತರ ವಿಶ್ವವಿದ್ಯಾಲಯಕ್ಕೆ ವರ್ಗಾಯಿಸಲಾಗಿದೆ. ಕೋವಿಡ್-19 ಮಾರಕ ರೋಗದ ಪ್ರಸರಣೆಯಿಂದಾಗಿ ಎದುರಾಗಿದ್ದ ಸಂಕಷ್ಟದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ

--2

ಸುಸ್ಥಿತಿಯನ್ನು ಮರು ಸ್ಥಾಪಿಸುವ ನಿಟ್ಟಿನಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ:06.07.2020 ರನ್ವಯ ಎಲ್ಲಾ ನೇರ ನೇಮಕಾತಿಗಳಿಗೆ ನಿರ್ಬಂಧಿಸಲಾಗಿದ್ದ ಹಿನ್ನೆಲೆಯಲ್ಲಿ, ನೇಮಕಾತಿಗಳಿಗೆ ಅನುಮತಿಸಲಾಗಿರಲಿಲ್ಲ. ಆದರೆ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಸ್ಥಾಪನೆಯ ಉದ್ದೇಶಗಳನ್ನು ಈಡೇರಿಸಲು ಹಾಗೂ ವಿಶ್ವವಿದ್ಯಾಲಯ ಆಡಳಿತಾತ್ಮಕ ಹಾಗೂ ಶೈಕ್ಷಣಿಕ ಪ್ರಕಾರ್ಯಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಅನುವಾಗುವಂತೆ ನೇರ ನೇಮಕಾತಿಗಳನ್ನು ಕೈಗೊಳ್ಳಲು ಸಹಮತಿ ಪಡೆಯುವ ಸಲುವಾಗಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.

---

ಶಿಕ್ಷಣದ ಗುಣಮಟ್ಟದೊಂದಿಗೆ ರಾಜೀಯಾಗದಂತೆ ಹಾಗೂ ವಿದ್ಯಾರ್ಥಿಗಳಿಗೆ ಅನಾನುಕೂಲವಾಗದಂತೆ, ಖಾಯಂ ಬೋಧಕರು ಹಾಗೂ ಅತಿಥಿ ಉಪನ್ಯಾಸಕರಿಂದ ಬೋಧನಾ ಕಾರ್ಯಗಳನ್ನು ಹಾಗೂ ಖಾಯಂ ಬೋಧಕೇತರ ನೌಕರರು ಮತ್ತು ಹೊರಗುತ್ತಿಗೆ ಮೂಲಕ ಪಡೆಯಲಾಗಿರುವ ತಾತ್ಕಾಲಿಕ ನೌಕರರಿಂದ ಆಡಳಿತಾತ್ಮಕ ಪ್ರಕಾರ್ಯಗಳನ್ನು ನಿರ್ವಹಿಸಲಾಗುತ್ತಿದೆ.

(ಡಾ ॥ ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)

**ಇಡಿ/156/ಯುಬಿವಿ/2022**